**Akashvani : Bangalore**
**Regional Bulletin In Kannada**
**28.01.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.01.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ೬೦ ದಿನದೊಳಗೆ ಆರೋಪಪಟ್ಟಿ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ**

**೨. ಬೆಂಗಳೂರಿನಲ್ಲಿ ಜಲಮಂಡಳಿ ನಿರ್ವಹಣೆಗೆ ಕುಡಿಯುವ ನೀರಿನ ದರ ಏರಿಕೆ ಅನಿವಾರ್ಯ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

**೩. ಬೇಸಿಗೆಯಲ್ಲಿ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು ಸಂಭವಿಸದಂತೆ ಎಚ್ಚರವಹಿಸಲು ಅಧಿಕಾರಿಗಳಿಗೆ ಸರ್ಕಾರ ನಿರ್ದೇಶನ**

**೪. ಮುಡಾ ಪ್ರಕರಣ ; ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡ ವಿರುದ್ಧ ಲೋಕಾಯುಕ್ತಕ್ಕೆ ದೂರು**

**೫. ಡೆಹ್ರಾಡೂನ್‌ನಲ್ಲಿ ಇಂದು ರಾಷ್ಟ್ರೀಯ ಕ್ರೀಡಾಕೂಟಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ; ೧೦ ಸಾವಿರಕ್ಕೂ ಅಧಿಕ ಅಥ್ಲೀಟ್‌ಗಳು ಕಣಕ್ಕೆ**

**<><*<><>*><>**

ದೌರ್ಜನ್ಯ ಪ್ರಕರಣಗಳಲ್ಲಿ ೬೦ ದಿನದೊಳಗೆ ಆರೋಪಪಟ್ಟಿ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪೊಲೀಸರಿಗೆ ನಿರ್ದೇಶನ ನೀಡಿದ್ದಾರೆ. ಬೆಂಗಳೂರಿನಲ್ಲಿ ಅನುಸೂಚಿತ ಜಾತಿ, ಬುಡಕಟ್ಟುಗಳ ರಾಜ್ಯಮಟ್ಟದ ಜಾಗೃತ ಉಸ್ತುವಾರಿ ಮೇಲ್ವಿಚಾರಣಾ ಸಮಿತಿ ಜೊತೆ ಸಭೆ ನಡೆಸಿದ ಅವರು, ಯಾರಾದರೂ ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದರೆ ತೆರವುಗೊಳಿಸಲು ಅಡ್ವೋಕೇಟ್ ಜನರಲ್ ಅವರೊಂದಿಗೆ ಚರ್ಚಿಸಬೇಕು ಎಂದು ತಿಳಿಸಿದ್ದಾರೆ. ಯಾವುದೇ ಕಾರಣಕ್ಕೂ ಅರಣ್ಯವಾಸಿಗಳನ್ನು ಕಾಡಿನಿಂದ ಹೊರಗೆ ಹಾಕಬಾರದು ಎಂದು ಸೂಚನೆ ನೀಡಿದ್ದಾರೆ. ಅರಣ್ಯ ಹಕ್ಕು ಕಾಯ್ದೆಯಡಿ ಹಕ್ಕು ಪತ್ರಗಳನ್ನು ಸಮಪರ್ಕವಾಗಿ ನೀಡಬೇಕು ಎಂದು ಆದೇಶಿಸಿದ್ದಾರೆ. ಸಭೆಯಲ್ಲಿ ಅಧಿಕಾರಿಗಳು ನೀಡಿರುವ ಅನುಪಾಲನ ವರದಿಯಲ್ಲಿ ಮುಂದಿನ ಬಾರಿ ಜಿಲ್ಲಾವಾರು ಅಂಕಿ-ಅಂಶ ನಮೂದಿಸಲು ತಿಳಿಸಿದ್ದಾರೆ.

**<><*<><>*><>**

ಮುಡಾ ಪ್ರಕರಣದಲ್ಲಿ ಪತ್ನಿಗೆ ಇಡಿ ನೀಡಿರುವ ನೋಟಿಸ್ ರಾಜಕೀಯ ಪ್ರೇರಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ನ್ಯಾಯಾಲಯದಲ್ಲಿ ನ್ಯಾಯ ಸಿಗುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ. ಪ್ರಕರಣವನ್ನ ಸಿಬಿಐಗೆ ನೀಡಬೇಕಾ, ಬೇಡವೇ ಎಂಬ ಬಗ್ಗೆ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ. ಈ ಹಂತದಲ್ಲಿ ಆತುರ ಮಾಡುವುದು ಸರಿಯಲ್ಲ ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

**<><*<><>*><>**

ಬೆಂಗಳೂರಿನಲ್ಲಿ ಕುಡಿಯುವ ನೀರಿನ ಬೆಲೆ ಹೆಚ್ಚಳದ ಬಗ್ಗೆ ವರದಿ ನೀಡುವಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕಾವೇರಿ ಭವನದಲ್ಲಿಂದು ನಡೆದ ಮಹತ್ವದ ಸಭೆ ಬಳಿಕ ಮಾತನಾಡಿದ ಅವರು, ಬೆಂಗಳೂರು ಜಲಮಂಡಳಿಗೆ ಒಂದು ಸಾವಿರ ಕೋಟಿ ನಷ್ಟವಾಗುತ್ತಿದ್ದು, ವರದಿ ನೀಡಿದ ತಕ್ಷಣ ಅನುಷ್ಠಾನಕ್ಕೆ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ. ಕಳೆದ ೧೧ ವರ್ಷಗಳಿಂದ ನೀರಿನ ದರ ಏರಿಕೆ ಮಾಡಿಲ್ಲ ಎಂದು ತಿಳಿಸಿದ ಅವರು, ನೀರಿನ ಅಕ್ರಮ ಸಂಪರ್ಕಗಳ ಸಕ್ರಮಕ್ಕೆ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ. ನೀರಿನ ಬಿಲ್ ಬಾಕಿ ಮೊತ್ತ ತುಂಬಲು ಶೀಘ್ರವೇ ಒಟಿಎಸ್ ಜಾರಿ ಮಾಡಲಾಗುವುದು ಎಂದು ಹೇಳಿದ್ದಾರೆ.

**ಧ್ವನಿ : ಡಿ.ಕೆ. ಶಿವಕುಮಾರ್**

ಬೆಂಗಳೂರಿನಲ್ಲಿ ಇ-ಖಾತಾ ಹೊಂದಿಲ್ಲದ ಆಸ್ತಿಗಳಿಗೆ ಬಿ ಖಾತಾ ನೀಡುವ ಕ್ರಾಂತಿಕಾರಕ ವ್ಯವಸ್ಥೆ ಶೀಘ್ರವೇ ಜಾರಿಗೆ ಬರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಮನಗರ ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ತಪ್ಪಿಸಲು ತಕ್ಷಣವೇ ೨೮ ಕಿಲೋಮೀಟರ್ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ೪೦ ಕೋಟಿ ರೂಪಾಯಿ ಹಣ ಹಂಚಿಕೆ ಮಾಡಲಾಗುವುದು ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ರಾಮನಗರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆನೆಗಳು ನಾಡಿಗೆ ಬಂದು ಬೆಳೆಹಾನಿ, ಜೀವಹಾನಿ ಮಾಡುತ್ತಿದ್ದು, ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು ಎಂದಿದ್ದಾರೆ. ಜಿಲ್ಲೆಯಲ್ಲಿ ಆನೆ ಸಂಘರ್ಷ ಅತಿ ಹೆಚ್ಚು ಇರುವ ೮೫ ವಿಭಾಗಗಳ ಇದ್ದರೆ, ಹೆಚ್ಚಿನ ಸಂಘರ್ಷ ಇರುವ ೪೫ ವಿಭಾಗಗಳಿವೆ. ಮಧ್ಯಮ ಸಂಘರ್ಷದ ೪೦ ವಿಭಾಗಗಳಿವೆ ಹೀಗಾಗಿ, ಆನೆಗಳು ಅರಣ್ಯದಿಂದ ಹೊರಗೆ ಬಂದ ಸಂದರ್ಭದಲ್ಲಿ ಗ್ರಾಮಸ್ಥರಿಗೆ ಎಚ್ಚರಿಕೆ ಸಂದೇಶ ರವಾನಿಸಲು ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅರಣ್ಯ ಪ್ರದೇಶದೊಳಗೆ ವನ್ಯಜೀವಿಗಳಿಗೆ ಕುಡಿಯುವ ನೀರು ಮತ್ತು ಆಹಾರದ ಲಭ್ಯತೆಯ ಖಾತ್ರಿ ಪಡಿಸಲು ಕ್ರಮ ವಹಿಸುವಂತೆ ಹೇಳಿದ್ದಾರೆ. ಬೇಸಿಗೆಯಲ್ಲಿ ಕಾವೇರಿ ವನ್ಯಜೀವಿ ಧಾಮ ಸೇರಿದಂತೆ ಜಿಲ್ಲೆಯ ಎಲ್ಲ ಅರಣ್ಯಗಳಲ್ಲಿರುವ ನೀರು ಗುಂಡಿಗಳಲ್ಲಿ ನೀರು ಇರುವಂತೆ ಕ್ರಮ ವಹಿಸಬೇಕು. ಅಗತ್ಯ ಇರುವ ಕಡೆ ಕೊಳವೆಬಾವಿಗಳಿಗೆ ಸೌರ ಪಂಪ್ ಸೆಟ್ ಅಳವಡಿಸಿ ನಿರಂತರವಾಗಿ ನೀರು ಹಾಯಿಸಲು ಕ್ರಮ ವಹಿಸಬೇಕು ಎಂದು ತಿಳಿಸಿದ್ದಾರೆ. ಇದೇ ವೇಳೆ ಬೇಸಿಗೆಯಲ್ಲಿ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು ಸಂಭವಿಸದಂತೆ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ದದ ಮುಡಾ ಸೈಟ್ ಹಗರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ತನಿಖೆ ನಡೆಸಿದ್ದು, ಹೈಕೋರ್ಟ್ ಗೆ ವರದಿ ಸಲ್ಲಿಕೆಯಾಗಿದೆ. ಈ ನಡುವೆ ಜೆಡಿಎಸ್ ಶಾಸಕ ಜಿ.ಟಿ ದೇವೇಗೌಡ ವಿರುದ್ಧವೂ ಅಕ್ರಮವಾಗಿ ೫೦:೫೦ ಅನುಪಾತದಲ್ಲಿ ಸುಮಾರು ೧೯ ನಿವೇಶನಗಳನ್ನು ಪಡೆದುಕೊಂಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಸಂಬಂಧ ಶಾಸಕ ಜಿ.ಟಿ ದೇವೇಗೌಡ ಹಾಗೂ ಪುತ್ರ ಶಾಸಕ ಹರೀಶ್ ಗೌಡ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಲ್ಲಿಕೆಯಾಗಿದೆ.

<><*<><>*><>

ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್‌ಧವನ್ ಬಾಹ್ಯಾಕಾಶ ಕೇಂದ್ರದಿಂದ ಇಸ್ರೋ ವತಿಯಿಂದ ಚಾರಿತ್ರಿಕ ೧೦೦ನೇ ಉಪಗ್ರಹ ಉಡ್ಡಯನಕ್ಕೆ ಕ್ಷಣಗಣನೆ ಆರಂಭವಾಗಿದೆ. ಜಿಯೋಸಿಂಕ್ರೋನಸ್ ಭೂಕೇಂದ್ರಿತ ಉಪಗ್ರಹ ಉಡ್ಡಯನ ವಾಹನ ರಾಕೆಟ್‌ನಲ್ಲಿ ಎನ್‌ವಿಎಸ್-೨ ದಿಕ್ಸೂಚಿ ಉಪಗ್ರಹವನ್ನು ನಾಳೆ ಮುಂಜಾನೆ ಉಡ್ಡಯನ ಮಾಡಲಾಗುವುದು ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ತಿಳಿಸಿದೆ. ಇದು ಜಿಎಸ್‌ಎಲ್‌ವಿ ರಾಕೆಟ್‌ನ ೧೫ನೇ ಹಾರಾಟವಾಗಿದೆ. ಹೆಚ್ಚಿನ ಮಾಹಿತಿಯನ್ನ ಇಸ್ರೋ ಅಂತರ್ಜಾಲದಲ್ಲಿ ಪಡೆಯಬಹುದು. ಇದರ ನೇರ ಪ್ರಸಾರವನ್ನು ಇಸ್ರೋ ಯುಟ್ಯೂಬ್ ವಾಹಿನಿ ಮೂಲಕ ವೀಕ್ಷಿಸಬಹುದಾಗಿದೆ.

<><*<><>*><>

ಉತ್ತರಾಖಂಡದ ೮ ಜಿಲ್ಲೆಗಳ ೧೧ ನಗರಗಳಲ್ಲಿ ಇಂದಿನಿಂದ ಫೆಬ್ರವರಿ ೧೪ರವರೆಗೆ ೩೮ನೇ ರಾಷ್ಟ್ರೀಯ ಕ್ರೀಡಾಕೂಟ ನಡೆಯಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಡೆಹ್ರಾಡೂನ್‌ನಲ್ಲಿ ಇಂದು ಕ್ರೀಡಾಕೂಟ ಉದ್ಘಾಟಿಸಲಿದ್ದಾರೆ. ಉತ್ತರಾಖಂಡದ ರಜತ ಮಹೋತ್ಸವದ ಸಂದರ್ಭದಲ್ಲಿ ಈ ರಾಷ್ಟ್ರೀಯ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ. ೩೬ ರಾಜ್ಯ, ಕೇಂದ್ರಾಡಳಿತ ಪ್ರದೇಶಗಳ ತಂಡಗಳು ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಲಿವೆ. ಈ ಕ್ರೀಡಾಕೂಟದಲ್ಲಿ ೧೦ ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಬ್ಯಾಡ್ಮಿಂಟನ್ ಆಟಗಾರ ಲಕ್ಷ್ಯಸೇನ್ ಹಾಗೂ ಅಂಕಿತ ಧ್ಯಾನಿ ಧ್ವಜದಾರಿಗಳಾಗಿ ಮುನ್ನಡೆಯಲಿದ್ದಾರೆ. ಇಂದು ನಡೆದ ಮಹಿಳಾ ಬಾಸ್ಕೆಟ್ ಬಾಲ್ ಪಂದ್ಯ ಒಂದರಲ್ಲಿ -ಪಂಜಾಬ್ ಉತ್ತರಾಖಂಡ ತಂಡವನ್ನು ೯೬-೫೪ ಅಂಕಗಳಿಂದ ಮಣಿಸಿದೆ. ಮತ್ತೊಂದು ಪಂದ್ಯದಲ್ಲಿ ದೆಹಲಿ ತಂಡ-ಚತ್ತೀಸ್‌ಗಢ ತಂಡವನ್ನು ೭೬-೭೫ ಅಂಕಗಳಿಂದ ಪರಾಭವಗೊಳಿಸಿದೆ. ಮಹಿಳೆಯರ ಬಾಸ್ಕೆಟ್ ಬಾಲ್ ಪಂದ್ಯದ ಬಿ ಗುಂಪಿನಲ್ಲಿ ಛತ್ತೀಸ್‌ಗಢ್ ವಿರುದ್ಧ ಕೇರಳ ಜಯಗಳಿಸಿದೆ. ಮಹಿಳೆಯರ ಬೀಚ್ ಹ್ಯಾಂಡ್‌ಬಾಲ್ ಸ್ಪರ್ಧೆಯಲ್ಲಿ ಹರಿಯಾಣ ವಿರುದ್ಧ ಮಹಾರಾಷ್ಟ್ರ ಸೋಲು ಅನುಭವಿಸಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಬೆಳಗಾವಿ ಗ್ರಾಮೀಣ ಕ್ಷೇತ್ರದ ಮೋದಗಾ ಗ್ರಾಮದಲ್ಲಿ ಒಳಾಂಗಣ ರಸ್ತೆ ಹಾಗೂ ಚರಂಡಿ ನಿರ್ಮಾಣದ ಕಾಮಗಾರಿಗಳಿಗೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಇಂದು ಭೂಮಿ ಪೂಜೆ ನೆರವೇರಿಸಿದರು.

೨. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್‌ಗಳು ಸಾರ್ವಜನಿಕರಿಗೆ ನೀಡಿರುವ ಸಾಲಗಳಿಗೆ ಸಂಬಂಧಿಸಿದಂತೆ ಸಂತ್ರಸ್ತರಿಂದ ಜಿಲ್ಲಾಡಳಿತಕ್ಕೆ ಈವರೆಗೆ ೨೭ ಸಾವಿರದ ೫೪ ದೂರು ಅರ್ಜಿಗಳು ಬಂದಿವೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾಹಿತಿ ನೀಡಿದ್ದಾರೆ.

೩. ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ್ ಕೃಷಿ ವಿಜ್ಞಾನ ಕೇಂದ್ರ ವತಿಯಿಂದ ನಡೆದ ಕೃಷಿ ತಂತ್ರಜ್ಞಾನ ಹಾಗೂ ಯಂತ್ರೋಪಕರಣಗಳ ವಸ್ತು ಪ್ರದರ್ಶನವನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಉದ್ಘಾಟಿಸಿದರು.

೪. ಇದೇ ೩೦ ರಂದು "ಸರ್ವೋದಯ ದಿನ"ದ ಪ್ರಯುಕ್ತ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಾಂಸ ಮಾರಾಟ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

೫. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೋಲೀಸ್, ನೆಹರು ಯುವ ಕೇಂದ್ರ, ವತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ರಸ್ತೆ ಸುರಕ್ಷತೆ ಕುರಿತ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

೬ ರಾಷ್ಟ್ರೀಯ ಹೆದ್ದಾರಿಯಲ್ಲಿ ಕರ್ಕಶ ಧ್ವನಿ ಮೂಲಕ ಸಾರ್ವಜನಿಕರಿಗೆ ತೊಂದರೆ ನೀಡಿ ಕಿರಿಕಿರಿ ಉಂಟುಮಾಡುತ್ತಿದ್ದ ಆ ಕಾರುಗಳ ಚಾಲಕರ ಮೇಲೆ ಪ್ರಕರಣ ದಾಖಲಿಸಿ ಕಾರುಗಳನ್ನು ಜಪ್ತಿ ಮಾಡಲಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ಅಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ.

೭. ರಾಜ್ಯ ಸರ್ಕಾರದಿಂದ ಮುಂದಿನ ತಿಂಗಳೊಳಗೆ ರಾಷ್ಟ್ರೀಯ ಪಿಂಚಣಿ ವ್ಯವಸ್ಥೆ ರದ್ದು ಮಾಡಿ, ಹಳೇ ಪಿಂಚಣಿ ವ್ಯವಸ್ಥೆ ಜಾರಿಗೊಳಿಸಲು ಪ್ರಯತ್ನಿಸಲಾಗುತ್ತದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಕೋಲಾರದಲ್ಲಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**